ಕರ್ನಾಟಕ ವಿಧಾನ ಪರಿಷತ್ತು

1. ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ : 481
2. ಸದಸ್ಯರ ಹೆಸರು : ಶ್ರೀ ಅಲ್ಲಂ ವೀರಭದ್ರಪ್ಪ (ವಿಧಾನ ಸಭೆಯಿಂದ ಚುನಾಯಿತರಾದವರು)
3. ಉತ್ತರಿಸುವ ದಿನಾಂಕ : 16-12-2021
4. ಉತ್ತರಿಸುವವರು : ಮಾನ್ಯ ಮುಖ್ಯಮಂತ್ರಿಗಳು

ಕ್ರ ಸಂ	ಪ್ರಶ್ನೆ	ಉತ್ತರ
ಅ	ಬೆಂಗಳೂರು ನಗರದಲ್ಲಿ ಸತತ ಮಳೆ ಸುರಿಯುತ್ತಿದ್ದು, ಹೀಗೆ ಬಿದ್ದ ಮಳೆ ನೀರನ್ನು ಸಂಗ್ರಹಿಸುವ ವ್ಯವಸ್ಥೆಯನ್ನು ಮಾಡಲು ಸರ್ಕಾರ ಚಿಂತಿಸಿದೆಯೇ;	ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ವ್ಯಾಪ್ತಿಯಲ್ಲಿ, ಮಳೆ ನೀರನ್ನು ಸಂಗ್ರಹಿಸುವ ದೃಷ್ಟಿಯಿಂದ ಹಲವಾರು ಸ್ಥಳಗಳಲ್ಲಿ ಮಳೆ ನೀರು ಕೊಯ್ಲು ಪದ್ಧತಿಯನ್ನು ಅಳವಡಿಸಿಕೊಳ್ಳಲಾಗಿರುತ್ತದೆ ಹಾಗೂ ಬೆಂಗಳೂರು ಜಲ ಮಂಡಳಿ ವತಿಯಿಂದ ಬೆಂಗಳೂರು ನಗರದಲ್ಲಿರುವ ಕಟ್ಟಡಗಳಿಗೆ ಮಳೆ ನೀರು ಕೊಯ್ಲು ಪದ್ಧತಿ ಅಳವಡಿಸಿಕೊಳ್ಳಲು ಬಿ.ಬಿಎಂ.ಪಿ ವ್ಯಾಪ್ತಿಯಲ್ಲಿ ಬರುವ 216 ಚದರ ಮೀಟರ್ ಹಾಗೂ ಅದಕ್ಕಿಂತ ಮೇಲ್ಪಟ್ಟ ವಿಸ್ತೀರ್ಣವುಳ್ಳ ನಿವೇಶನದಲ್ಲಿ ಈಗಾಗಲೇ ಕಟ್ಟಡವನ್ನು ನಿರ್ಮಿಸಿದವರಿಗೆ ಮತ್ತು ಹೊಸದಾಗಿ ಕಟ್ಟಡವನ್ನು 108 ಚದರ ಮೀಟರ್ ಮತ್ತು ಅದಕ್ಕಿಂತ ಮೇಲ್ಪಟ್ಟ ವಿಸ್ತೀರ್ಣದಲ್ಲಿ ನಿರ್ಮಿಸಿದರೆ ಕಡ್ಡಾಯವಾಗಿ ಮಳೆ ನೀರು ಕೊಯ್ಲು ಅಳವಡಿಸಬೇಕೆಂದು ಬೆಂಗಳೂರು ಜಲ ಮಂಡಳಿ ವಿನಿಮಯ ಕಾಯ್ದೆ ಸೆಕ್ಷನ್ 72(ಎ)ಗೆ ತಿದ್ದುಪಡಿ ತರಲಾಗಿರುತ್ತದೆ. ಈ ಪದ್ಧತಿಯನ್ನು ಅಳವಡಿಸಿಕೊಳ್ಳದೆ ಇರುವ ಕಟ್ಟಡಗಳಿಗೆ ಮಾಹೆಯಾನ ಬಿಲ್ಲಿನಲ್ಲಿ ಹೆಚ್ಚುವರಿಯಾಗಿ ದಂಡವನ್ನು ವಿಧಿಸಲಾಗುತ್ತಿರುತ್ತದೆ. ಮುಂದುವರೆದಂತೆ, ಮಳೆ ನೀರಿನ ಸಂಗ್ರಹ ಹಾಗೂ ಮರುಬಳಕೆಗಾಗಿ ಮತ್ತು ಅಂತರ್ಜಲ ವೃದ್ಧಿಸಲು ಬೆಂಗಳೂರು ಜಲಮಂಡಳಿ ವಿನಿಯಮ ಕಾಯ್ದೆ 72(ಎ)ಗೆ ದಿನಾಂಕ: 06.05.2020 ರಂದು ಈ ಕೆಳಕಂಡಂತೆ ತಿದ್ದುಪಡಿಯನ್ನು ತರಲಾಗಿರುತ್ತದೆ. ➢ ಕಟ್ಟಡದ ತಾರಸಿ / ಮೇಲ್ಚಾವಣೆಯ ಮೇಲೆ ಬೀಳುವ ಮಳೆ ನೀರು ಸಂಗ್ರಹಣೆಗಾಗಿ ಹಾಗೂ ಮರು ಬಳಕೆಗಾಗಿ ಪ್ರತಿ ಚದರ ಮೀಟರ್‌ಗೆ 20 ಲೀಟರ್‌ನಿಂದ 60 ಲೀಟರ್‌ಗೆ ಹೆಚ್ಚಿಸಲಾಗಿದೆ. ಹಾಗೂ ➢ ನಡೆದಾಡುವ ಮತ್ತು ಬಯಲು ಪ್ರದೇಶದಲ್ಲಿ ಪ್ರತಿ ಚದರ ಮೀಟರ್‌ಗೆ ಅಂತರ್ಜಲ ವೃದ್ಧಿಸಲು ಮಳೆ ನೀರು ಇಂಗು ಗುಂಡಿಗಳ ನಿರ್ಮಾಣಕ್ಕೆ 10 ಲೀಟರ್‌ನಿಂದ 30 ಲೀಟರ್‌ಗೆ ಹೆಚ್ಚಿಸಲಾಗಿದೆ.

ಆ	ಸರ್ಕಾರದ ಉದ್ಯಾನವನಗಳು, ಕಟ್ಟಡಗಳ ತಳಮಟ್ಟದಲ್ಲಿ ಮಳೆ ನೀರನ್ನು ಸಂಗ್ರಹಿಸುವಂತಹ ಅಗಾಧ ಯೋಜನೆಯನ್ನು ರೂಪಿಸಲು ಸರ್ಕಾರ ಮುಂದಾಗುವುದೇ;	ಸರ್ಕಾರದ ಉದ್ಯಾನವನಗಳು, ಕಟ್ಟಡಗಳು, ಚರಂಡಿಗಳಲ್ಲಿ, ಪಾದಚಾರಿ ಮಾರ್ಗಗಳಲ್ಲಿ ಮಳೆ ನೀರು ಕೊಯ್ಲು ಪದ್ಧತಿಯನ್ನು ಅಳವಡಿಸಿಕೊಂಡು ಅಂತರ್ಜಲ ಮಟ್ಟವನ್ನು ಕಾಯ್ದುಕೊಳ್ಳಲು ಕ್ರಮವಹಿಸಲಾಗುತ್ತಿದೆ. ಅಲ್ಲದೇ, ಮಳೆ ನೀರನ್ನು ಸಂಗ್ರಹಿಸುವ ಸಲುವಾಗಿ ಹಲವಾರು ಕೆರೆಗಳನ್ನು ಅಭಿವೃದ್ಧಿಗೊಳಿಸಲಾಗಿದ್ದು, ಈ ಕೆರೆಗಳಲ್ಲಿ ಮಳೆ ನೀರು ಸಂಗ್ರಹಿಸಲು ಕ್ರಮವಹಿಸಲಾಗುತ್ತಿರುತ್ತದೆ. ಬೆಂಗಳೂರು ಜಲಮಂಡಳಿಗೆ ಒಳಪಡುವ ಎಲ್ಲಾ ನೆಲ ಮಟ್ಟದ ಜಲಗಾರ, ತ್ಯಾಜ್ಯ ನೀರು ಸಂಸ್ಕರಣಾ ಘಟಕಗಳಲ್ಲಿ, ಕಛೇರಿ ಮತ್ತು ವಸತಿ ಗೃಹಗಳಲ್ಲಿ ಮಳೆ ನೀರು ಕೊಯ್ಲು ಪದ್ಧತಿಯನ್ನು ಅಳವಡಿಸಿಕೊಳ್ಳಲಾಗಿರುತ್ತದೆ.
ಇ	ಮಳೆ ನೀರಿನ ಮರುಬಳಕೆ, ಅಂತರ್ಜಲ ಮಟ್ಟ ಕಾಯ್ದುಕೊಳ್ಳುವಿಕೆ ನಿಟ್ಟಿನಲ್ಲಿ ಸರ್ಕಾರ ಗಂಭೀರವಾಗಿ ಯೋಚಿಸುವುದೇ?	ಮಳೆ ನೀರಿನ ಮರುಬಳಕೆಗೆ ಸಂಬಂಧಿಸಿದಂತೆ, ಅಂತರ್ಜಲ ಮಟ್ಟವನ್ನು ಕಾಯ್ದುಕೊಳ್ಳುವ ಸಂಬಂಧ ಸರ್ಕಾರದ ಉದ್ಯಾನವನಗಳು ಕಟ್ಟಡಗಳು, ಚರಂಡಿಗಳಲ್ಲಿ, ಪಾದಚಾರಿ ಮಾರ್ಗಗಳಲ್ಲಿ ಮಳೆ ನೀರು ಕೊಯ್ಲು ಪದ್ಧತಿಯನ್ನು ಅಳವಡಿಸಿಕೊಳ್ಳಲಾಗಿರುತ್ತದೆ. ಬೆಂಗಳೂರು ಜಲ ಮಂಡಳಿ ವತಿಯಿಂದ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಬರುವ ಕಟ್ಟಡಗಳಲ್ಲಿ ಮಳೆ ನೀರಿನ ಸಂಗ್ರಹಣೆ ಹಾಗೂ ಮರುಬಳಕೆಗಾಗಿ ಮತ್ತು ಅಂತರ್ಜಲ ವೃದ್ಧಿಸಲು ಬೆಂಗಳೂರು ಜಲಮಂಡಳಿ ವಿನಿಯಮ ಕಾಯ್ದೆ ಸೆಕ್ಷನ್ 72(ಎ)ಗೆ ದಿನಾಂಕ: 06.05.2020 ರಂದು ಈ ಕೆಳಕಂಡಂತೆ ತಿದ್ದುಪಡಿಯನ್ನು ತರಲಾಗಿದೆ. ➢ ಕಟ್ಟಡದ ತಾರಸಿ/ ಮೇಲ್ಛಾವಣೆಯ ಮೇಲೆ ಬೀಳುವ ಮಳೆ ನೀರು ಸಂಗ್ರಹಣೆಗಾಗಿ ಹಾಗೂ ಮರು ಬಳಕೆಗಾಗಿ ಪ್ರತಿ ಚದರ ಮೀಟರ್‌ಗೆ 20 ಲೀಟರ್‌ನಿಂದ 60 ಲೀಟರ್‌ಗೆ ಹೆಚ್ಚಿಸಲಾಗಿದೆ. ಹಾಗೂ ➢ ನಡೆದಾಡುವ ಮತ್ತು ಬಯಲು ಪ್ರದೇಶದಲ್ಲಿ ಪ್ರತಿ ಚದರ ಮೀಟರ್ಗೆ ಅಂತರ್ಜಲ ವೃದ್ಧಿಸಲು ಮಳೆ ನೀರು ಇಂಗು ಗುಂಡಿಗಳ ನಿರ್ಮಾಣಕ್ಕೆ 10 ಲೀಟರ್‌ನಿಂದ 30 ಲೀಟರ್‌ಗೆ ಹೆಚ್ಚಿಸಲಾಗಿದೆ.

ನಅಇ 356 ಎಂಎಸ್‌ವೈ 2021

(ಬಸವರಾಜ ಬೊಮ್ಮಾಯಿ)
ಮುಖ್ಯಮಂತ್ರಿ